# Regional Bulletin In Kannada

## 14.09.2024 : 18.40hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

14.09.2024 : 18.40hrs

******

ಮುಖ್ಯಾಂಶಗಳು:

೧. ತುಮಕೂರಿನಲ್ಲಿ ೭೦ ಕೋಟಿ ವೆಚ್ಚದಲ್ಲಿ ಜಯದೇವ ಹೃದ್ರೋಗ ಆಸ್ಪತ್ರೆ ನಿರ್ಮಾಣ - ಸಚಿವ ಜಿ. ಪರಮೇಶ್ವರ್

೨. ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಶಾಂತಿ ಸಭೆ ನಡೆಸಿದ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ

೩. ಶಿಗ್ಗಾಂವಿ ಉಪಚುನಾವಣೆಗೆ ಸಂಸದ ಬಸವರಾಜ ಬೊಮ್ಮಾಯಿ ನಿವಾಸದಲ್ಲಿ ಬಿಜೆಪಿ ಮಹತ್ವದ ಸಭೆ

೪. ನಾಳೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ; ಮಾನವ ಸರಪಳಿ ನಿರ್ಮಿಸುವ ಮೂಲಕ ಸಂವಿಧಾನದ ಬಗ್ಗೆ ಜಾಗೃತಿ

********

ಬೆಂಗಳೂರಿನ ಜಯದೇವ ಹೃದ್ರೋಗ ಆಸ್ಪತ್ರೆಯ ಭಾಗವಾಗಿ, ತುಮಕೂರಿನಲ್ಲಿ ೭೦ ಕೋಟಿ ರೂಪಾಯಿ ವೆಚ್ಚದಲ್ಲಿ ಕಾರ್ಡಿಯಾಲಜಿ ಕೇಂದ್ರವನ್ನು ನಿರ್ಮಿಸಲಾಗುವುದು ಎಂದು ಗೃಹ ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ. ಇದರಿಂದ ಶಿವಮೊಗ್ಗ, ಹಾಸನ, ಚಿತ್ರದುರ್ಗ ಮುಂತಾದ ಜಿಲ್ಲೆಗಳ ಜನರಿಗೆ ಅನುಕೂಲವಾಗಲಿದೆ ಎಂದರು. ರಾಷ್ಟ್ರೀಯ ಹೆದ್ದಾರಿ ೪ರಲ್ಲಿ ಲೋಕೋಪಯೋಗಿ ಇಲಾಖೆ, ತುಮಕೂರು ಮಹಾನಗರ ಪಾಲಿಕೆ ಹಾಗೂ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ ವತಿಯಿಂದ ನೂತನವಾಗಿ ನಿರ್ಮಿಸಿರುವ ಸೇತುವೆ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಈ ಸೇತುವೆಯಿಂದ ಕೊರಟಗೆರೆ, ಶಿರಾ, ಮಧುಗಿರಿ ಭಾಗದಿಂದ ಸಂಚರಿಸುವ ಜನರಿಗೂ ಅನುಕೂಲವಾಗಲಿದೆ ಎಂದು ಹೇಳಿದರು. ಇದೇ ವೇಳೆ ಸರ್ಕಾರ ಗ್ಯಾರಂಟಿ ಹಾಗೂ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಲು ಸಮರ್ಥವಾಗಿದೆ ಎಂದು ತಿಳಿಸಿದರು. ಎತ್ತಿನ ಹೊಳೆ ಯೋಜನೆಗೆ ೨ ಸಾವಿರ ಕೋಟಿ ಅನುದಾನ ನೀಡಲು ಮುಖ್ಯಮಂತ್ರಿಗಳು ಒಪ್ಪಿದ್ದಾರೆ ಎಂದು ಸ್ಪಷ್ಟಪಡಿಸಿದರು.

********

ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಸಂಭವಿಸಿದ ಗಲಭೆಗೆ ಸಂಬಂಧಿಸಿದಂತೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ನೇತೃತ್ವದಲ್ಲಿ ನಾಗಮಂಗಲ ಪಟ್ಟಣದಲ್ಲಿ ಶಾಂತಿ ಸಭೆ ನಡೆಸಲಾಯಿತು. ಜಿಲ್ಲಾಧಿಕಾರಿ ಡಾ.ಕುಮಾರ, ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಸೇರಿದಂತೆ ಹಲವು ಅಧಿಕಾರಿಗಳ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ಹಿಂದೂ ಮತ್ತು ಮುಸ್ಲಿಂ ಸಮುದಾಯದ ಪ್ರಮುಖ ಮುಖಂಡರು ಭಾಗಿಯಾಗಿದ್ದರು. ಮುಂದೆ ಇಂತಹ ಘಟನೆ ನಡೆಯದಂತೆ ಸೌಹಾರ್ದ ರೀತಿಯಲ್ಲಿ ಬದುಕುವಂತೆ ಚಲುವರಾಯಸ್ವಾಮಿ ಮನವಿ ಮಾಡಿದ್ದಾರೆ.

********

ಹಾವೇರಿ ಜಿಲ್ಲೆ ಶಿಗ್ಗಾವಿ-ಸವಣೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಸಿದ್ಧತೆ ಬಗ್ಗೆ ಚರ್ಚಿಸಲು ಸಂಸದ ಬಸವರಾಜ ಬೊಮ್ಮಾಯಿ ನಿವಾಸದಲ್ಲಿ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನದಾಸ್ ಅಗರವಾಲ್ ನೇತೃತ್ವದಲ್ಲಿ ಸಭೆ ಆಯೋಜಿಸಲಾಗಿತ್ತು. ಸಭೆಯಲ್ಲಿ ಟಿಕೆಟ್ ಕೋರಿ ೫೭ ಆಂಕಾಂಕ್ಷಿಗಳು ಅರ್ಜಿ ಸಲ್ಲಿಸಿದ್ದಾರೆ. ಸಭೆಯಲ್ಲಿ ಮಾತನಾಡಿದ ರಾಧಾ ಮೋಹನ್‌ದಾಸ್, ಸಭೆ ನಡೆಸಿ ಒಮ್ಮತದ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗುವುದು ಎಂದು ತಿಳಿಸಿದರು. ಪಕ್ಷ ಸೂಚಿಸುವ ಅಭ್ಯರ್ಥಿ ಗೆಲುವಿಗೆ ಎಲ್ಲರೂ ಶ್ರಮಿಸಬೇಕು. ಉಪಚುನಾವಣೆಗೆ ಅರ್ಹರಿರುವ ಆಕಾಂಕ್ಷಿಗಳ ಕುರಿತು ಸಾಮೂಹಿಕ ಅಭಿಪ್ರಾಯ ಸಂಗ್ರಹಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

********

ಗುತ್ತಿಗೆದಾರನಿಗೆ ಜೀವ ಬೆದರಿಕೆ ಮತ್ತು ಜಾತಿ ನಿಂದನೆ ಮಾಡಿದ ಆರೋಪದ ಮೇಲೆ ರಾಜರಾಜೇಶ್ವರಿ ನಗರ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಪೊಲೀಸರು ಎರಡು ಎಫ್‌ಐಆರ್ ದಾಖಲಿಸಿದ್ದಾರೆ. ಬೆಂಗಳೂರಿನ ವೈಯಾಲಿಕಾವಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬಿಜೆಪಿ ಶಾಸಕ ಮುನಿರತ್ನ ಜೊತೆಗೆ ಅವರ ಆಪ್ತ ಸಹಾಯಕ ವಿಜಯ್‌ಕುಮಾರ್, ವೈಯಕ್ತಿಕ ಭದ್ರತಾ ಸಿಬ್ಬಂದಿ ಅಭಿಷೇಕ್ ಮತ್ತು ವಸಂತಕುಮಾರ್ ವಿರುದ್ಧವೂ ಪ್ರಕರಣ ದಾಖಲಾಗಿದೆ. ಈ ಸಂಬಂಧ ಗುತ್ತಿಗೆದಾರ ಚೆಲುವರಾಜು ಅವರು ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ ಅವರಲ್ಲಿ ರಕ್ಷಣೆ ಕೋರಿ ದೂರು ಸಲ್ಲಿಸಿದ್ದಾರೆ.

ಈ ನಡುವೆ ಮುನಿರತ್ನ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಗುತ್ತಿಗೆದಾರ ಚಲುವರಾಜು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ

ಸಲ್ಲಿಸಿದರು. ಎಫ್ಐಆರ್ ಆದ ಬಳಿಕ ಪೊಲೀಸರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಅವರು ದೂರಿದರು.

********

ಜಾತಿ ನಿಂದನೆ, ಮಹಿಳೆಯರ ಬಗ್ಗೆ ಹಗುರವಾಗಿ ಮಾತನಾಡಿರುವುದುಹಾಗೂ ಗುತ್ತಿಗೆದಾರನ ಬಳಿ ಲಂಚಕ್ಕೆ ಬೇಡಿಕೆಯಿಟ್ಟಿರುವ ಶಾಸಕ ಮುನಿರತ್ನ ಅವರನ್ನು ಬಿಜೆಪಿಯಿಂದ ಉಚ್ಚಾಟಿಸಬೇಕು ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಮುನಿರತ್ನ ಅವರನ್ನು ವಿಧಾನಸಭಾ ಸ್ಪೀಕರ್‌ರವರು, ಶಾಸಕ ಸ್ಥಾನದಿಂದ ವಜಾ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಇಂತಹ ನಾಯಕರು ರಾಜ್ಯದಲ್ಲಿ ಇದ್ದರೆ ಜಾತಿ ಸಂಘರ್ಷಗಳು ಹೆಚ್ಚಾಗುತ್ತವೆ. ಹೀಗಾಗಿ ಇವರ ವಿರುದ್ಧ ಶೀಘ್ರ ಕ್ರಮ ತೆಗೆದುಕೊಳ್ಳಬೇಕು ಎಂದು ಮುಖ್ಯಮಂತ್ರಿ ಹಾಗೂ ಗೃಹಸಚಿವರಲ್ಲಿ ಮನವಿ ಮಾಡಿದ್ದಾರೆ.

********

ಬೆಂಗಳೂರು ನಗರದಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿದ್ದು, ಸರ್ಕಾರಿ ರಜಾ ದಿನಗಳಲ್ಲೂ ಅಧಿಕಾರಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್ ಸೂಚಿಸಿದ್ದಾರೆ.ಯಲಹಂಕ ವಲಯ ವ್ಯಾಪ್ತಿಯಲ್ಲಿ ೮೬೫ ಕಿಲೋಮೀಟರ್ ಉದ್ದದ ೫ ಸಾವಿರದ ೪೩೩ ರಸ್ತೆಗಳನ್ನು ಡಾಂಬರೀಕರಣ ನಡೆಸಲು ಯೋಜನೆ ರೂಪಿಸಿದ್ದು, ಶೀಘ್ರ ಡಾಂಬರೀಕರಣ ಕೆಲಸ ಕೈಗೆತ್ತಿಕೊಳ್ಳಲಾಗುತ್ತದೆ ಎಂದು ಹೇಳಿದರು. ಇಂದಿನಿಂದ ೩ ದಿನಗಳ ಕಾಲ ಸರ್ಕಾರಿ ರಜೆಯಿದ್ದು, ರಜಾ ದಿನಗಳಲ್ಲೂ ವಲಯ ಆಯುಕ್ತರು, ಜಂಟಿ ಆಯುಕ್ತರು ಹಾಗೂ ಇಂಜಿನಿಯರ್‌ಗಳು ರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚುವ ಕೆಲಸ ಮಾಡಲಿದ್ದಾರೆ ಎಂದು ತಿಳಿಸಿದ್ದಾರೆ.

********

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ನಾಳೆ ಆಯೋಜಿಸಲಾದ ಮಾನವ ಸರಪಳಿ ರಚನೆ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ. ಬಿ. ಪಾಟೀಲ್ ಕರೆ ನೀಡಿದ್ದಾರೆ. ವಿಜಯಪುರ ಜಿಲ್ಲೆಯ ನಾಗರೀಕರು, ಸರ್ಕಾರಿ, ಸರ್ಕಾರೇತರ ಅಧಿಕಾರಿಗಳು, ಹಾಗೂ ಸಿಬ್ಬಂದಿ ಸೇರಿದಂತೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ತಿಳಿಸಿದ್ದಾರೆ. ಬೀದರ್‌ನಿಂದ ಚಾಮರಾಜನಗರದವರೆಗೆ

ಸುಮಾರು ೨ ಸಾವಿರದ ೫೦೦ ಕೀಲೋಮೀಟರ್ ಉದ್ದದ ಮಾನವ ಸರಪಳಿ ರಚನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

********

ನಾಳೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ. ಬೀದರ್‌ನಿಂದ ಚಾಮರಾಜನಗರದವರೆಗೆ ಸುಮಾರು ೨ ಸಾವಿರದ ೫೦೦ ಕೀಲೋಮೀಟರ್ ಮಾನವ ಸರಪಳಿ ರಚನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡುವ ಹಾಗೂ ಅದನ್ನು ಉತ್ತೇಜಿಸುವ ರಾಜ್ಯ ಸರ್ಕಾರದ ಬದ್ದತೆಗೆ ಅನುಸಾರವಾಗಿ ನಾಳೆ ಮಾನವ ಸರಪಳಿ ರಚಿಸಲು ಸಕಲ ಸಿದ್ದತೆ ಕೈಗೊಳ್ಳಲಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ. ಶಿವಮೊಗ್ಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ನಾಳೆ ಮಾನವ ಸರಪಳಿ ರಚನೆ ಮೂಲಕ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ. ಮೈಸೂರು ಜಿಲ್ಲೆಯಲ್ಲಿ ೨೫ ಲಕ್ಷ ಜನರಿಂದ ಸುಮಾರು ೨ ಸಾವಿರದ ೫೦೦ ಕಿಲೋಮೀಟರ್ ಉದ್ದದ ಮಾನವ ಸರಪಳಿಯನ್ನು ರಚಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ತಿಳಿಸಿದ್ದಾರೆ. ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ ೭೭ ಕಿ.ಮೀ ಉದ್ದದ ಮಾನವ ಸರಪಳಿ ರಚನೆಗೆ ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನು ಕೈಗೊಂಡಿದೆ. ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಮನವಿ ಮಾಡಿದ್ದಾರೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನದ ಅಂಗವಾಗಿ ನಾಳೆ ವಿಜಯನಗರ ಜಿಲ್ಲೆಯಲ್ಲಿ ನಡೆಯುವ ಐತಿಹಾಸಿಕ ಮಾನವ ಸರಪಳಿ ಕಾರ್ಯಕ್ರಮಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ವಿಜಯನಗರ ವಿಧಾನಸಭಾ ಕ್ಷೇತ್ರದ ಶಾಸಕ ಹೆಚ್.ಆರ್.ಗವಿಯಪ್ಪ ಮನವಿ ಮಾಡಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಏರ್ಪಡಿಸಲಾಗುವ ೧೪೫ ಕಿಲೋಮೀಟರ್ ಉದ್ದದ ಮಾನವ ಸರಪಳಿ ಕಾರ್ಯಕ್ರಮದ ಅಂತಿಮ ಸಿದ್ಧತೆಯನ್ನು ಜಿಲ್ಲಾಧಿಕಾರಿ ವೆಂಕಟೇಶ್ ಪರಿಶೀಲನೆ ನಡೆಸಿದರು. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಪ್ರಜಾಪ್ರಭುತ್ವ ವನ ನಿರ್ಮಾಣ ಮಾಡುವ ನಿಟ್ಟಿನಲ್ಲಿ ನಾಳೆ ವಿಜಯಪುರ ಜಿಲ್ಲೆಯಾದ್ಯಂತ ೨೮.೫೦ ಹೆಕ್ಟೇರ್ ಪ್ರದೇಶದಲ್ಲಿ ೩೦ ಸಾವಿರ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ತಿಳಿಸಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಭಾಗಿತ್ವದಲ್ಲಿ ಅಂತಾರಾಷ್ಟ್ರೀಯ

ಪ್ರಜಾಪ್ರಭುತ್ವ ದಿನಾಚರಣೆಯ ಸಭಾ ಕಾರ್ಯಕ್ರಮವು ನಾಳೆ ಉತ್ತರಕನ್ನಡ ಜಿಲ್ಲೆಯ ಹೊನ್ನಾವರದ ಮೂಡ ಗಣಪತಿ ಸಭಾ ಭವನದಲ್ಲಿ ನಡೆಯಲಿದೆ.

********

ಅಮೆರಿಕ ಪ್ರವಾಸದ ವೇಳೆ ರಾಹುಲ್ ಗಾಂಧಿ ಮೀಸಲಾತಿ ಹಿಂಪಡೆಯುವ ಹೇಳಿಕೆ ನೀಡಿದ್ದನ್ನು ಖಂಡಿಸಿ ಬಿಜೆಪಿ ಇಂದು ಬೆಂಗಳೂರಿನ ಫ್ರೀಡಂ ಪಾರ್ಕ್ ಬಳಿ ಪ್ರತಿಭಟನೆ ನಡೆಸಿತು. ವಿಧಾನಪರಿಷತ್ ಪ್ರತಿ ಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ರಾಹುಲ್ ಗಾಂಧಿಯವರ ಹೇಳಿಕೆ ಕಾಂಗ್ರೆಸ್ ಪಕ್ಷ ದಲಿತ ಮತ್ತು ಮೀಸಲಾತಿ ವಿರೋಧಿ ಎಂಬುದನ್ನು ಸಾಬೀತುಪಡಿಸುತ್ತದೆ ಎಂದು ಟೀಕಿಸಿದರು. ನೆಹರೂ-ಗಾಂಧಿ ಕುಟುಂಬ ನಿರಂತರವಾಗಿ ಮೀಸಲಾತಿಯನ್ನು ವಿರೋಧಿಸುತ್ತಿದೆ," ಎಂದು ಅವರು ಆರೋಪಿಸಿದರು. ೨೦೧೪ರ ಚುನಾವಣೆಯಲ್ಲಿ ಕಾಂಗ್ರೆಸ್ ೫೦ ಕ್ಕಿಂತ ಕಡಿಮೆ ಸ್ಥಾನಗಳನ್ನು ಪಡೆದ ಹಿನ್ನಲೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ವಿರೋಧ ಪಕ್ಷದ ನಾಯಕ ಸ್ಥಾನವನ್ನು ನೀಡಲಾಯಿತು ಎಂದು ಹೇಳಿದರು.

********

ವಿಜಯಪುರ ಜಿಲ್ಲೆಗೆ ಕೇಂದ್ರ ಜಲ ಶಕ್ತಿ ತಂಡದ ನೋಡಲ್ ಅಧಿಕಾರಿಗಳಾದ ವಿಕಾಸ್ ಡೋಗ್ರಾ, ಬೃಹತ್ ಕೈಗಾರಿಕೆ ಸಚಿವಾಲಯ ಮತ್ತು ಕೇಂದ್ರ ಜಲ ಶಕ್ತಿ ನೋಡಲ್ ಅಧಿಕಾರಿಗಳು, ವಿಜಯಪುರ ತಾಲೂಕು ಹಾಗೂ ಇಂಡಿ ತಾಲೂಕುಗಳ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಕಾಮಗಾರಿ ಪರಿಶೀಲನೆ ನಡೆಸಿದರು. ವಿಜಯಪುರ ತಾಲೂಕಿನ ಭೂತನಾಳ ಗ್ರಾಮದ ಅರಣ್ಯ ಇಲಾಖೆಯ ನರ್ಸರಿಗೆ ಭೇಟಿ ನೀಡಿ ಸಸಿಗಳ ಪಾಲನೆ ಪೋಷಣೆಗಳ ಬಗ್ಗೆ ಮಾಹಿತಿ ಪಡೆದ ಅವರು, ಸ್ವತಃ ತಾವೇ ಸಸಿಗಳಿಗೆ ನೀರುಣಿಸಿದರು. ತಿಡಗುಂದಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ನಿರ್ಮಿಸಿರುವ ಪ್ರತಿ ಮನೆಗಳಿಗೆ ನಲ್ಲಿಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆಯಾಗುತ್ತಿರುವ ಕುರಿತು ಪರಿಶೀಲನೆ ನಡೆಸಿ, ಸಮರ್ಪಕವಾಗಿ ನೀರು ಪೂರೈಸುವಂತೆ ಸೂಚನೆ ನೀಡಿದರು.

*******

ನಾಡಹಬ್ಬ ದಸರಾ ಶಿವಮೊಗ್ಗ ಜಿಲ್ಲೆಯಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆಸಲು ನಿರ್ಧರಿಸಲಾಗಿದೆ. ಈ ಬಾರಿ ಪಾಲಿಕೆ ಅನುದಾನವನ್ನ ಹೊರತುಪಡಿಸಿ ಸರ್ಕಾರಕ್ಕೆ ಹೆಚ್ಚಿನ ಅನುದಾನ ನೀಡುವಂತೆ ಮನವಿ ಸಲ್ಲಿಸಲಾಗಿದೆ ಎಂದು ಶಿವಮೊಗ್ಗ ಶಾಸಕ ಎಸ್.ಎನ್ ಚನ್ನಬಸವ ತಿಳಿಸಿದ್ದಾರೆ. ಈ ಬಾರಿ ವಿಶೇಷವಾಗಿ ಗಮಕ ದಸರಾ, ಪೌರ ಕಾರ್ಮಿಕರ

ದಸರಾ, ಪತ್ರಕರ್ತರ ದಸರಾ ಆಚರಣೆಗೆ ಯೋಚಿಸಲಾಗಿದೆ. ದಸರಾಕ್ಕೆ ಮೂರು ಆನೆಗಳನ್ನು ಕೇಳಿದ್ದು, ಅರಣ್ಯ ಇಲಾಖೆ ಸಚಿವರ ಜೊತೆ ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದರು.

********

ಸಂಕ್ಷಿಪ್ತ ಸುದ್ದಿಗಳು

೧. ಜಾತಿಯ ಶ್ರೇಷ್ಠತೆ ಕಾರಣಕ್ಕೆ ತಾರತಮ್ಯ ಮಾಡುತ್ತಿದ್ದವರ ವಿರುದ್ಧ ಹೋರಾಟ ನಡೆಸಿ ಪುರೋಹಿತಶಾಹಿ ವ್ಯವಸ್ಥೆಯನ್ನು ಖಂಡಿಸಿದ ಅವರು, ಶ್ರೇಷ್ಠ ಸಮಾಜ ಸುಧಾರಕರಾದ ಬ್ರಹ್ಮ ಶ್ರೀ ನಾರಾಯಣ ಗುರುಗಳು ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

೨. ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಚಿಕ್ಕಮಗಳೂರಿನಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.